ಕರ್ನಾಟಕ ಸರ್ಕಾರ

**ಡಿಸೆಂಬರ್ 12, 2017**

# ಡಿಸೆಂಬರ್ 13 ರಿಂದ ಅಭಿವೃದ್ಧಿ ಪರ್ವ – ರಾಜ್ಯಾದ್ಯಂತ ಮುಖ್ಯಮಂತ್ರಿಯವರ ಒಂದು ತಿಂಗಳ ಸುದೀರ್ಘ ಪ್ರವಾಸ ಪ್ರಾರಂಭ




**ಬೆಂಗಳೂರು, ಡಿಸೆಂಬರ್ 12:**

ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ಭೇಟಿ ನೀಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಅಭಿವೃದ್ಧಿ ಪರ್ವ – ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಒಂದು ತಿಂಗಳ ಸುದೀರ್ಘ ಪ್ರವಾಸ ಕಾರ್ಯಕ್ರಮವು ಡಿಸೆಂಬರ್ 13 ರಿಂದ ಪ್ರಾರಂಭವಾಗಲಿದೆ.

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಮೊದಲ ದಿನವೇ ಮೊದಲ ಒಂದು ತಾಸಿನಲ್ಲೇ ಹಸಿವು ಮುಕ್ತ ಕರ್ನಾಟಕವನ್ನು ರೂಪಿಸುವ ಅನ್ನಭಾಗ್ಯ, ಗುಡಿಸಲು ಮುಕ್ತ ಕರ್ನಾಟಕವನ್ನು ರೂಪಿಸಲು ವಸತಿ ಭಾಗ್ಯ, ಅಲ್ಪಸಂಖ್ಯಾತರು, ಹಿಂದುಳಿದವರು ಮತ್ತು ದಲಿತ ಸಮುದಾಯದವರು ಸ್ವಾವಲಂಭಿ ಜೀವನ ನಡೆಸಲು ವಿವಿಧ ಅಭಿವೃದ್ಧಿ ನಿಗಮಗಳಿಂದ ಪಡೆದ ಸಾಲ ಮನ್ನಾ ಮಾಡುವ ಋಣಮುಕ್ತ ಭಾಗ್ಯ ಒಳಗೊಂಡಂತೆ ಆರು ಭಾಗ್ಯಗಳನ್ನು ರಾಜ್ಯದ ಜನತೆಗೆ ಕೊಡುಗೆ ನೀಡಿದ ಕೀರ್ತಿ ಸಿದ್ದರಾಮಯ್ಯ ಅವರದ್ದು.

ಹಣಕಾಸು ಖಾತೆಯನ್ನೂ ಹೊತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾವು ಮಂಡಿಸಿದ ಐದು ಆಯವ್ಯಯಗಳಲ್ಲಿ ಚುನಾವಣಾ ಪೂರ್ವದಲ್ಲಿ ನೀಡಿದ 165 ಭರವಸೆಗಳ ಪೈಕಿ 155 ಭರವಸೆಗಳನ್ನು ಈಡೇರಿಸಿ ನುಡಿದಂತೆ ನಡೆದಿದ್ದಾರೆ ಎಂಬ ಕೀರ್ತಿ–ಗೌರವಗಳಿಗೆ ಪಾತ್ರರಾಗಿದ್ದಾರೆ. ಚುನಾವಣಾ ಪೂರ್ವ ಭರವಸೆಗಳು ಮಾತ್ರವಲ್ಲದೆ, ಕೆಲವು ಹೊಸ ಯೋಜನೆಗಳನ್ನೂ ಅನುಷ್ಠಾನಕ್ಕೆ ತರುವಲ್ಲಿ ಸಿದ್ದರಾಮಯ್ಯ ಅವರು ಯಶಸ್ವಿಯಾಗಿದ್ದಾರೆ.

**ಕಲ್ಲು ಹಾಕುವ ಕಾರ್ಯಕ್ರಮಗಳಲ್ಲ !**

ಚುನಾವಣೆಗಳು ಸಮೀಪಿಸುತ್ತಿದ್ದಂತೆಯೇ ಅಡಿಗಲ್ಲು ಹಾಕುವ ಸಮಾರಂಭ, ಭೂಮಿ ಪೂಜೆ, ಶಂಕುಸ್ಥಾಪನಾ ಕಾರ್ಯಕ್ರಮ ಹಾಗೂ ಶಿಲಾನ್ಯಾಸ ಸಮಾರಂಭಗಳು ನಡೆಯುವುದು ಸಾಮಾನ್ಯ. ಆದರೆ, ನಮ್ಮದು ಕಲ್ಲು ಹಾಕುವ ಕಾರ್ಯಕ್ರಮಗಳಲ್ಲ. ನಮ್ಮ ಸರ್ಕಾರವು ಅಸ್ತಿತ್ವಕ್ಕೆ ಬಂದ ಮೊದಲನೇ ದಿನದಿಂದಲೂ ಅಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಚಾಲನೆ ನೀಡಿದ್ದೇವೆ. ಈ ಸರ್ಕಾರದ ಅವಧಿಯು ಪೂರ್ಣಗೊಳ್ಳುವ ಅಂತಿಮ ದಿನವೂ ಕೂಡ ಅಭಿವೃದ್ಧಿ ಚಟುವಟಿಕೆಗಳನ್ನು ಮುಂದುವರೆಸುತ್ತೇವೆ ಎಂಬುದು ಸಿದ್ದರಾಮಯ್ಯ ಅವರ ಸ್ಪಷ್ಟ ನುಡಿ ಹಾಗೂ ಧೃಢ ನಿಲುವಾಗಿದೆ.

ಅಂತೆಯೇ, ಡಿಸೆಂಬರ್ 13 ರಂದು ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಪ್ರಾರಂಭವಾಗಲಿರುವ ಅಭಿವೃದ್ಧಿ ಪರ್ವ – ಒಂದು ತಿಂಗಳ ತಮ್ಮ ಸುದೀರ್ಘ ಪ್ರವಾಸ ಕಾರ್ಯಕ್ರಮದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನಾ ಹಾಗೂ ಶಿಲಾನ್ಯಾಸ ಕಾರ್ಯಕ್ರಮಗಳು ಮಾತ್ರವಲ್ಲ, ಉದ್ಘಾಟನಾ ಹಾಗೂ ಲೋಕಾರ್ಪಣಾ ಸಮಾರಂಭಗಳೂ ಸೇರಿವೆ. ಸಮ ಸಮಾಜದ ಹರಿಕಾರ ಅಣ್ಣ ಬಸವಣ್ಣನ ಕರ್ಮಭೂಮಿ ಬಸವಕಲ್ಯಾಣದಲ್ಲಿ ಪ್ರಾರಂಭವಾಗಲಿರುವ ಈ ಅಭಿವೃದ್ಧಿ ಪರ್ವ ಅದೇ ದಿನ ಹುಮ್ನಾಬಾದ್ ಹಾಗೂ ಭಾಲ್ಕಿ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮುಂದುವರೆಯಲಿದೆ. ಸಿದ್ದರಾಮಯ್ಯ ಅವರು ಅಂದು ಬೀದರ್‌ನಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಡಿಸೆಂಬರ್ 14 ರಂದು ಕೊಪ್ಪಳ ಜಿಲ್ಲೆಯ ಗಂಗಾವತಿ, ಕನಕಗಿರಿ ಮತ್ತು ಕುಷ್ಠಗಿ ವಿಧಾನಸಭಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿರುವ ಸಿದ್ದರಾಮಯ್ಯ ಅವರು ಅದೇ ದಿನ ರಾಯಚೂರಿನಲ್ಲಿ ತಂಗಲಿದ್ದಾರೆ. ಡಿಸೆಂಬರ್ 15 ರಂದು ರಾಯಚೂರು ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿರುವ ಮುಖ್ಯಮಂತ್ರಿಯವರು ಅಂದು ಕಲಬುರಗಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಡಿಸೆಂಬರ್ 16 ರಂದು ಕಲಬುರಗಿ ಜಿಲ್ಲೆಯ ಅಫಲ್ಜಪುರ, ಸೇಡಂ ಮತ್ತು ಜೇವರ್ಗಿ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಸಿದ್ದರಾಮಯ್ಯ ಅವರು ಯಾದಗಿರಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿಸೆಂಬರ್ 17 ರಂದು ಶಹಾಪುರ, ಸುರಪುರ ಹಾಗೂ ಗುರುಮಿಠಕಲ್ ವಿಧಾನಸಭಾ ಕ್ಷೇತ್ರಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಹಸಿರು ನಿಶಾನೆ ತೋರಿ ಬಳ್ಳಾರಿಯಲ್ಲಿ ತಂಗಲಿದ್ದಾರೆ.

ಡಿಸೆಂಬರ್ 18 ರಂದು ಬಳ್ಳಾರಿ ಜಿಲ್ಲೆಯ ಸಂಡೂರು, ಹೂವಿನಹಡಗಲಿ ಮತ್ತು ಹಗರಿಬೊಮ್ಮನಹಳ್ಳಿ ವಿಧನಸಭಾ ಕ್ಷೇತ್ರಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಸಿದ್ದರಾಮಯ್ಯ ಅವರು ಬಾಗಲಕೋಟೆಯಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿಸೆಂಬರ್ 19 ರಂದು ಜಮಖಂಡಿ, ತೇರದಾಳ ಹಾಗೂ ಬೀಳಗಿ ವಿಧಾನಸಭಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಬಾಗಲಕೋಟೆಯಲ್ಲಿಯೇ ತಂಗಲಿದ್ದಾರೆ.

ಡಿಸೆಂಬರ್ 20 ರಂದು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ, ಬಬಲೇಶ್ವರ ಮತ್ತು ವಿಜಯಪುರ ನಗರ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ವಿಜಯಪುರದಲ್ಲಿ ವಾಸ್ತವ್ಯ ಹೂಡಲಿರುವ ಸಿದ್ದರಾಮಯ್ಯ ಅವರು ಡಿಸೆಂಬರ್ 21 ರಂದು ಬೆಳಗಾವಿ ಜಿಲ್ಲೆಯ ಗೋಕಾಕ ಮತ್ತು ರಾಯಭಾಗ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಕಾಮಗಾರಿಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ಅಂತೆಯೇ, ಬೆಳಗಾವಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಡಿಸೆಂಬರ್ 22 ರಂದು ಬೆಳಗಾವಿ ಜಿಲ್ಲೆಯ ಯಮಕನಮರಡಿ, ರಾಮದುರ್ಗ ಮತ್ತು ಕಿತ್ತೂರು ವಿಧಾನಸಭಾ ಕ್ಷೇತ್ರಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಮುಖ್ಯಮಂತ್ರಿಯವರು ಹಾವೇರಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿಸೆಂಬರ್ 23 ರಂದು ಹಾವೇರಿ ಜಿಲ್ಲೆಯ ಹಾವೇರಿ ಮತ್ತು ಬ್ಯಾಡಗಿ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಧಾರವಾಡದಲ್ಲಿ ತಂಗಲಿದ್ದಾರೆ.

ಡಿಸೆಂಬರ್ 24 ರಂದು ಧಾರವಾಡ ಜಿಲ್ಲೆಯ ಕುಂದಗೋಡ, ಹುಬ್ಬಳ್ಳಿ ಮತ್ತು ಧಾರವಾಡ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಗದಗದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿಸೆಂಬರ್ 25 ರಂದು ಗದಗ ಜಿಲ್ಲೆಯ ಗದಗ ಮತ್ತು ಲಕ್ಷ್ಮೇಶ್ವರ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ದಾವಣಗೆರೆಯಲ್ಲಿ ತಂಗಲಿದ್ದಾರೆ.

ಡಿಸೆಂಬರ್ 26 ರಂದು ದಾವಣಗೆರೆ ಜಿಲ್ಲೆಯ ಹೊನ್ನಾಳಿ, ಹರಪ್ಪನಹಳ್ಳಿ ಮತ್ತು ಜಗಳೂರು ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಡಿಸೆಂಬರ್ 27 ರಂದು ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ, ಚಳ್ಳಕೆರೆ ಮತ್ತು ಹಿರಿಯೂರು ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ತುಮಕೂರಿನಲ್ಲಿ ತಂಗಲಿದ್ದಾರೆ.

ಡಿಸೆಂಬರ್ 28 ರಂದು ತುಮಕೂರು ಜಿಲ್ಲೆಯ ಶಿರಾ ವಿಧಾನಸಭಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ರಾಜಧಾನಿ ಬೆಂಗಳೂರಿಗೆ ಹಿಂದಿರುಗಲಿದ್ದಾರೆ.

ಡಿಸೆಂಬರ್ 29 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು, ಬಾಗೇಪಲ್ಲಿ ಮತ್ತು ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಸಿದ್ದರಾಮಯ್ಯ ಅವರು ಬೆಂಗಳೂರಿಗೆ ವಾಪಸ್ಸಾಗಿ ಡಿಸೆಂಬರ್ 30 ರಂದು ಕೋಲಾರ ಜಿಲ್ಲೆಯ ಶ್ರೀನಿವಾಸಪುರ, ಮುಳಬಾಗಿಲು ಮತ್ತು ಬಂಗಾರಪೇಟೆ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ವಾಸ್ತವ್ಯ ಹೂಡಲಿದ್ದಾರೆ.

**ಡಿಸೆಂಬರ್ 31, ಜನವರಿ 1 ಮತ್ತು 2 ರಂದು ಪ್ರವಾಸ ಇಲ್ಲ**

ಡಿಸೆಂಬರ್ 31, ಜನವರಿ 1 ಮತ್ತು 2 ರಂದು ಪ್ರವಾಸ ಇರುವುದಿಲ್ಲ. ನೂತನ ವರ್ಷಾರಂಭದ ಸುಸಂದರ್ಭದಲ್ಲಿ ಗಣ್ಯಾತಿಗಣ್ಯರಿಗೆ ಶುಭ ಹಾರೈಸುವುದು, ಹಿರಿಯ ಅಧಿಕಾರಿಗಳೊಂದಿಗೆ ಶುಭಾಶಯ ವಿನಿಮಯ ಮಾಡಿಕೊಳ್ಳುವುದೂ ಒಳಗೊಂಡಂತೆ ಪ್ರಮುಖ ಹಾಗೂ ತುರ್ತು ಕಾರ್ಯಗಳ ನಿರ್ವಹಣೆಗೆ ಈ ಮೂರೂ ದಿನಗಳನ್ನು ಮುಖ್ಯಮಂತ್ರಿ ಮೀಸಲಿರಿಸಿದ್ದಾರೆ.

**ಜನವರಿ 3 ರಿಂದ ಅಭಿವೃದ್ಧಿ ಪರ್ವ ಮತ್ತೆ ಪ್ರಾರಂಭ**

ಜನವರಿ 3 ರಂದು ಮತ್ತೆ ತಮ್ಮ ಅಭಿವೃದ್ಧಿ ಪರ್ವದ ಪ್ರವಾಸ ಕಾರ್ಯಕ್ರಮವನ್ನು ಪ್ರಾರಂಭಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಮನಗರ ಜಿಲ್ಲೆಯ ಮಾಗಡಿ ಮತ್ತು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಬೆಂಗಳೂರಿಗೆ ಮರಳಲಿದ್ದಾರೆ.

ಜನವರಿ 4 ರಂದು ಹಾಸನ ಜಿಲ್ಲೆಯ ಅರಸೀಕೆರೆ, ಬೇಲೂರು ಮತ್ತು ಅರಕಲಕೂಡು ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಸಿದ್ದರಾಮಯ್ಯ ಅವರು ಚಿಕ್ಕಮಗಳೂರಿನಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಜನವರಿ 5 ರಂದು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ, ತರೀಕೆರೆ ಮತ್ತು ಕಡೂರು ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಶಿವಮೊಗ್ಗದಲ್ಲಿ ವಾಸ್ತವ್ಯ ಹೂಡುವ ಸಿದ್ದರಾಮಯ್ಯ ಅವರು ಜನವರಿ 6 ರಂದು ಶಿವಮೊಗ್ಗ ನಗರ, ತೀರ್ಥಹಳ್ಳಿ ಮತ್ತು ಸಾಗರ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಂಗಳೂರಿನಲ್ಲಿ ತಂಗಲಿದ್ದಾರೆ.

ಜನವರಿ 7 ರಂದು ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ, ಪುತ್ತೂರು ಮತ್ತು ಮೂಡಬಿದರೆ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಉಡುಪಿಯಲ್ಲಿ ವಾಸ್ತವ್ಯ ಹೂಡುವ ಮುಖ್ಯಮಂತ್ರಿಯವರು ಜನವರಿ 8 ರಂದು ಉಡುಪಿ ಜಿಲ್ಲೆಯ ಬೈಂದೂರು, ಕಾಪು ಮತ್ತು ಉಡುಪಿ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಡಿಕೇರಿಯಲ್ಲಿ ತಂಗಲಿದ್ದಾರೆ.

**ಚಾಮರಾಜನಗರ : ಭೇಟಿ ಮಾತ್ರವಲ್ಲ, ವಾಸ್ತವ್ಯ ಕೂಡಾ !**

ಜನವರಿ 9 ರಂದು ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಸಿದ್ದರಾಮಯ್ಯ ಅವರು ಚಾಮರಾಜನಗರದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಚಾಮರಾಜನಗರಕ್ಕೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಭೇಟಿ ನೀಡುತ್ತಿರುವುದು ಮಾತ್ರವಲ್ಲ, ಅಲ್ಲೇ ವಾಸ್ತವ್ಯ ಹೂಡುತ್ತಿರುವುದೂ ಕೂಡಾ ಗಮನಾರ್ಹ.

ಜನವರಿ 10 ರಂದು ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಕೊಳ್ಳೆಗಾಲ ಮತ್ತು ಹನೂರು ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಲೈ ಮಹದೇಶ್ವರ ಬೆಟ್ಟದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಜನವರಿ 11 ರಂದು ಮೈಸೂರು ಜಿಲ್ಲೆಯ ಹೆಗ್ಗಡದೇವನಕೋಟೆ, ನಂಜನಗೂಡು ಮತ್ತು ಸ್ವ-ಕ್ಷೇತ್ರ ವರುಣಾ ಒಳಗೊಂಡಂತೆ ತಿರುಮಕೂಡಲು ನರಸೀಪುರ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಸಿದ್ದರಾಮಯ್ಯ ಅವರು ಮಂಡ್ಯದಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಜನವರಿ 12 ರಂದು ಮಂಡ್ಯ ಜಿಲ್ಲೆಯ ಕೃಷ್ಣರಾಜಪೇಟೆ, ಶ್ರೀರಂಗಪಟ್ಟಣ ಮತ್ತು ಮಳವಳ್ಳಿ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಬೆಂಗಳೂರಿಗೆ ಹಿಂದಿರುಗಲಿದ್ದಾರೆ. ಅಲ್ಲದೆ, ಜನವರಿ 13 ರಂದು ರಾಮನಗರ ಜಿಲ್ಲೆಯ ಕನಕಪುರ ವಿಧಾನಸಭಾ ಕ್ಷೇತ್ರಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಬೆಂಗಳೂರಿಗೆ ವಾಪಸ್ಸಾಗಲಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಆರೂ ವಿಧಾನ ಸಭಾಕ್ಷೇತ್ರಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 6 ಮತ್ತು 7 ರಂದು ಈಗಾಗಲೇ ಭೇಟಿ ನೀಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದಾರೆ. ಅಭಿವೃದ್ಧಿಯ ವಿಷಯದಲ್ಲಿ ಎಲ್ಲೂ ಯಾರೂ ರಾಜಕೀಯ ಮಾಡಬಾರದು ಎಂಬ ತತ್ವಕ್ಕೆ ಬದ್ಧರಾಗಿರುವ ಸಿದ್ದರಾಮಯ್ಯ ಅವರು ಅಭಿವೃದ್ಧಿಯ ವಿಚಾರದಲ್ಲಿ ತಾರತಮ್ಯ ಮಾಡುವುದಿಲ್ಲ ಎಂದು ನಿಲುವು ತಳೆದಿದ್ದಾರೆ. ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳ

ಅಭಿವೃದ್ಧಿಯಾದಲ್ಲಿ ಮಾತ್ರ ರಾಜ್ಯದ ಸರ್ವಾಂಗೀಣ ಅಭಿವೃದ್ಧಿ ಎಂಬ ಸದಾಶಯವನ್ನು ಸಾಕಾರಗೊಳಿಸಲು ಅಭಿವೃದ್ಧಿ ಪರ್ವದ ಈ ಪ್ರವಾಸ ಕಾರ್ಯಕ್ರಮಕ್ಕೆ ಸಿದ್ದರಾಮಯ್ಯ ಅವರು ಮುಂದಾಗಿದ್ದಾರೆ.

***********

**ಡಿ ಪಿ ಎಂ**